# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಅಲ್ಪಸಂಖ್ಯಾತರ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ಅನಾಥಾಲಯ, ವೃಧ್ಧಾಶ್ರಮ, ಹೆಚ್.ಐ.ವಿ/ಏಡ್ಸ್ ಸೋಂಕಿತ ರೋಗಿಗಳು ಮತ್ತು ಮಾನಸಿಕ ಹಾಗೂ ದೈಹಿಕ ವಿಕಲಚೇತನರ ಆಶ್ರಯಧಾಮಗಳಿಗೆ ಸಹಾಯನುಧಾನವನ್ನು ನೀಡುವ ಬಗ್ಗೆ.

ಓದಲಾಗಿದೆ:-
1. ಮಾನ್ಯ ಮುಖ್ಯಮಂತ್ರಿಯವರ 2017-18 ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ : 218
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯುಡಿ 320 ಎಂಡಿಎಸ್ 2011., ದಿ: 16.01.2012
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯುಡಿ 307 ಎಂಡಿಎಸ್ 2014, ದಿ: 26.08.2014
4. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯುಡಿ 339 ಎಂಡಿಎಸ್ 2016, ದಿ: 04.01.2017
5. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರ ಪ್ರಸ್ತಾವನೆಯ ಸಂಖ್ಯೆ:ಅಸಂಇ ಆಯವ್ಯಯ ಭಾಷಣ /218/ಸಿಆರ್-176/2016-17, ದಿ:01.04.2017

*~*~*~*

**ಪ್ರಸ್ತಾವನೆ:-**

ಸನ್ಮಾನ್ಯ ಮುಖ್ಯಮಂತ್ರಿಯವರು ಮೇಲೆ (1) ರಲ್ಲಿನ 2017-18 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 218 ರಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತಾರೆ.

**"ಅನಾಥಾಲಯ, ವೃಧ್ಧಾಶ್ರಮ, ಹೆಚ್.ಐ.ವಿ/ಏಡ್ಸ್ ಸೋಂಕಿತ ರೋಗಿಗಳು ಮತ್ತು ಮಾನಸಿಕ ಹಾಗೂ ದೈಹಿಕ ವಿಕಲಚೇತನರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಕ್ರಿಶ್ಚಿಯನ್ ಸಂಸ್ಥೆಗಳಿಗೆ ನೀಡುತ್ತಿರುವ ಹಣಕಾಸಿನ ನೆರವಿನ ಮಾದರಿಯಲ್ಲಿ ಇತರೆ ಅಲ್ಪಸಂಖ್ಯಾತರ ಸಮುದಾಯದ ಸಂಸ್ಥೆಗಳಿಗೂ ನೆರವು ನೀಡಲಾಗುವುದು."**

ಮೇಲೆ (2) ರಲ್ಲಿನ ಸರ್ಕಾರದ ಆದೇಶದನ್ವಯ ಕ್ರಿಶ್ಚಿಯನ್ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ವೃಧ್ಧಾಶ್ರಮ ಮತ್ತು ಅನಾಥಾಶ್ರಮಗಳಿಗೆ ಸಂಬಂಧಿಸಿದಂತೆ ಸಹಾಯನುಧಾನವನ್ನು ನೀಡುವ ಸಂಹಿತೆಯನ್ನು ಹಾಗೂ ಮೇಲೆ (3) ರಲ್ಲಿ ಓದಲಾದ ಆದೇಶದನ್ವಯ ಈ ಸಂಹಿತೆಯನ್ನು ಮಾರ್ಪಡಿಸಿ ಆದೇಶಿಸಲಾಗಿದೆ.

ಮೇಲೆ (4) ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಕ್ರಿಶ್ಚಿಯನ್ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ಹೆಚ್.ಐ.ವಿ/ಏಡ್ಸ್ ಸೋಂಕಿತ ರೋಗಿಗಳು ಮತ್ತು ಮಾನಸಿಕ ಹಾಗೂ ದೈಹಿಕ ವಿಕಲಚೇತನರ ಆಶ್ರಯಧಾಮಗಳಿಗೆ ಸಹಾಯಾನುದಾನವನ್ನು ನೀಡಲು ಆದೇಶಿಸಲಾಗಿದೆ.